# ರಾಷ್ಟ್ರಮಟ್ಟದ ಅಂತರ್ ವಿವಿ ಯುವ ಜನೋತ್ಸವ: ಮಂಗಳೂರು ವಿವಿಗೆ ಪ್ರಶಸ್ತಿ

**ಕೊಣಾಜೆ:** ಅಮಿಟಿ ವಿಶ್ವವಿದ್ಯಾಲಯ, ನೊಯ್ಡಾ ಇಲ್ಲಿ ಮಾ.3 ರಿಂದ 7ರ ವರೆಗೆ ನಡೆದ ರಾಷ್ಟ್ರಮಟ್ಟದ ಅಂತರ್ ವಿಶ್ವವಿದ್ಯಾಲಯ ಯುವ ಜನೋತ್ಸವದಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ತಂಡವು ಭಾಗವಹಿಸಿ ಹಲವು ಪ್ರಶಸ್ತಿಗಳನ್ನು ಬಾಚಿಕೊಂಡಿದೆ.

ಮಂಗಳೂರು ವಿವಿಯ ತಂಡದ ವಿದ್ಯಾರ್ಥಿಗಳು ಸ್ಥಳದಲ್ಲಿ ಛಾಯಾಚಿತ್ರ ಪ್ರಥಮ ಸ್ಥಾನ, ಚರ್ಚಾ ಸ್ಪರ್ಧೆ – ಪ್ರಥಮ ಸ್ಥಾನ, ಕಿರುನಾಟಕ – ದ್ವಿತೀಯ ಸ್ಥಾನ., ಶಾಸ್ತ್ರೀಯ ತಾಳವಾದ್ಯ (ವೈಯುಕ್ತಿಕ) – ತೃತೀಯ ಸ್ಥಾನ; ಜನಪದ ನೃತ್ಯ – ತೃತೀಯ ಸ್ಥಾನ, ಶಾಸ್ತ್ರೀಯ ನೃತ್ಯ (ಭಾರತೀಯ) – ದ್ವಿತೀಯ ಸ್ಥಾನ, ಶಾಸ್ತ್ರೀಯ ಸಂಗೀತ (ಹಿಂದುಸ್ತಾನಿ/ಕರ್ನಾಟಕ್) – ದ್ವಿತೀಯ ಸ್ಥಾನ, ಶಾಸ್ತ್ರೀಯ ಸ್ವರ ವಾದ್ಯ (ವೈಯಕ್ತಿಕ) – ದ್ವಿತೀಯ ಸ್ಥಾನ, ಲಘು ಸಂಗೀತ (ಭಾರತೀಯ) – ದ್ವಿತೀಯ ಸ್ಥಾನ, ಜನಪದ ಸಂಗೀತ ಮೇಳ – ಪ್ರಥಮ ಸ್ಥಾನ, ಸಮೂಹಗಾನ (ಭಾರತೀಯ) – 5ನೇ ಸ್ಥಾನ ಪಡೆದುಕೊಂಡರು. ಸಾಂಸ್ಕೃತಿಕ ಮೆರವಣಿಗೆಯಲ್ಲಿ 4ನೇ ಸ್ಥಾನ ಬಹುಮಾನಗಳನ್ನು ಪಡೆದುಕೊಂಡಿದೆ.



ನೃತ್ಯ ವಿಭಾಗದಲ್ಲಿ ತೃತೀಯ ಸ್ಥಾನ, ಸಮಗ್ರ ಪ್ರಶಸ್ತಿ ವಿಭಾಗದಲ್ಲಿ 3ನೇ ಸ್ಥಾನ ಪಡೆದುಕೊಂಡಿದೆ. ಆಳ್ವಾಸ್ ಕಾಲೇಜು, ಮೂಡಬಿದಿರೆ, ಗೋವಿಂದ ದಾಸ ಕಾಲೇಜು ಸುರತ್ಕಲ್, ಕೆನರಾ ಕಾಲೇಜು ಮಂಗಳೂರು, ಮಂಗಳಗಂಗೋತ್ರಿ ಕ್ಯಾಂಪಸ್ ಪ್ರತಿಭಾನ್ವಿತ ವಿದ್ಯಾರ್ಥಿಗಳು ಸ್ಪರ್ಧೆಗಳಲ್ಲಿ ಭಾಗವಹಿಸಿದ್ದರು.

**■ ವಿದ್ಯಾರ್ಥಿಗಳು ಹಾಗೂ ಪಕ್ಕವಾದ್ಯದವರು ಸೇರಿ ಒಟ್ಟು 38 ಜನರು ಸ್ಪರ್ಧೆಗಳಲ್ಲಿ ಭಾಗವಹಿಸಿದ್ದರು.**

ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯದ ನಿರ್ದೇಶಕ, ಪ್ರೊ. ಪ್ರಶಾಂತ ನಾಯ್ಕ, ಡಾ. ಲವೀನಾ ಕೆ.ಬಿ. ಮತ್ತು ಡಾ. ವೆಂಕಟೇಶ್ ಹೆಚ್. ಎಸ್. ಮಂಗಳೂರು ವಿಶ್ವವಿದ್ಯಾನಿಲಯ ತಂಡದ ನೇತೃತ್ವವನ್ನು ವಹಿಸಿದ್ದರು. ವಿದ್ಯಾರ್ಥಿಗಳು ಹಾಗೂ ಪಕ್ಕವಾದ್ಯದವರು ಒಟ್ಟು 38 ಜನರು ಸ್ಪರ್ಧೆಗಳಲ್ಲಿ ಭಾಗವಹಿಸಿದ್ದರು.

ಈ ಹಿಂದೆ ಮಂಗಳೂರು ವಿಶ್ವವಿದ್ಯಾನಿಲಯದ ಮಟ್ಟದ ಅಂತರ್ ಕಾಲೇಜು ಮಟ್ಟದ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಿ ಅದರಲ್ಲಿ ಪ್ರಶಸ್ತಿ ಪಡೆದು ಬೆಂಗಳೂರು ಕ್ರೈಸ್ಟ್ ವಿಶ್ವವಿದ್ಯಾಲಯದಲ್ಲಿ ನಡೆದ ಆಗ್ನೇಯ ವಲಯ ಮಟ್ಟದ ಯುವಜನೋತ್ಸವದ ಹಲವಾರು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಿ ಬಹುಮಾನಗಳನ್ನು ಗಳಿಸಿ ರಾಷ್ಟ್ರೀಯ ಮಟ್ಟದ ಯುವ ಜನೋತ್ಸವದಲ್ಲಿ ಭಾಗವಹಿಸುವ ಅವಕಾಶ ಪಡೆದುಕೊಂಡಿತ್ತು. ಮುಂದಿನ ಹಂತವಾಗಿ ರಾಷ್ಟ್ರೀಯ ಮಟ್ಟದ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದವರು ಅಂತಾರಾಷ್ಟ್ರೀಯ ಮಟ್ಟದ ಯುವಜನೋತ್ಸವದಲ್ಲಿ ಭಾಗವಹಿಸುವ ಅವಕಾಶ ಪಡೆಯಲಿದ್ದಾರೆ.

ಈ ಸಂದರ್ಭದಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಗೌರವಾನ್ವಿತ ಕುಲಪತಿಗಳಾದ ಪ್ರೊ. ಪಿ.ಎಲ್. ಧರ್ಮ ಹಾಗೂ ಕುಲಸಚಿವರಾದ ಕೆ. ರಾಜು ಮೊಗವೀರ ಕೆಎಎಸ್ ಅವರು ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ.

Scanned with OKEN Scanner